ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ, ಕುಂದಾಪುರ

ಸಿ.ಸಿ. ನಂಬ್ರ:2119/2018

ಚಾಸಾ:23 ಪ್ರಾಸಾ:12

ದಿನಾಂಕ: 13.01.2025

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ವಾಸುದೇವ ಹೇರಳೆ |
| ತಂದೆಯ ಹೆಸರು | : | ಪಿ ಎಸ್ ಹೇರಳೆ |
| ವಯಸ್ಸು | : | 76 ವರ್ಷ |
| ಉದ್ಯೋಗ | : | ಮನೆಯಲ್ಲಿ ಇರುವುದು |
| ವಾಸ ಸ್ಥಳ | : | ಸಾಲಿಗ್ರಾಮ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**<u>ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:</u>**

ನಾನು ದುರ್ಗಾಂಬಾ ಬಸ್ಸಿನಲ್ಲಿ ಗುಮಾಸ್ತನಾಗಿ ಕೆಲಸ ನಿರ್ವಹಿಸಿರುತ್ತೇನೆ. ನಮ್ಮ ದುರ್ಗಾಂಬಾ ಮೋಟಾರ್ ನ ಬಸ್ಸನ್ನು ಪೊಲೀಸ್ ಠಾಣೆಯಿಂದ ಬಿಡುಗಡೆಗೆ ಪಡೆದಿರುತ್ತೇನೆ. ಸಾಕ್ಷಿ ಕಲಂ 133ರ ನೊಟೀಸು, ಉತ್ತರ, ಇಂಡಿಮಿನಿಟಿ ಬಾಂಡುಗಳಲ್ಲಿ ತನ್ನ ಸಹಿಗಳನ್ನು ನೋಡಿ ಗುರುತಿಸಿದ ಮೇರೆಗೆ ಸದ್ರಿ ದಾಖಲೆಗಳನ್ನು ನಿಪಿ-15 ರಿಂದ 17 ಎಂದು, ಸಾಕ್ಷಿ ಸಹಿಗಳನ್ನು ನಿಪಿ-15(ಎ) ರಿಂದ 17(ಎ) ಎಂದು ಗುರುತಿಸಲಾಯಿತು. ಅವುಗಳಲ್ಲಿ ಏನು ಬರೆದಿದೆ ಎಂದು ನನಗೆ ತಿಳಿದಿದೆ.

ಆರೋಪಿಯ ಪರಿಚಯವಿಲ್ಲ. ಸಾಕ್ಷಿ ದಸ್ತಗಿರಿ ಪಂಚನಾಮೆಯನ್ನು ನೋಡಿ ಗುರುತಿಸಿದ್ದು ಅದರಲ್ಲಿ ಏನು ಬರೆದಿದೆ ಎಂದು ನನಗೆ ತಿಳಿದಿಲ್ಲ. ಪೊಲೀಸರು ಸೂಚಿಸಿದಂತೆ ಸದ್ರಿ ದಾಖಲೆಗೆ ಸಹಿ ಮಾಡಿರುತ್ತೇನೆ. ಸದ್ರಿ ದಾಖಲೆಯನ್ನು ನಿಪಿ-18 ಎಂದು, ಸಾಕ್ಷಿ ಸಹಿಯನ್ನು ನಿಪಿ-18(ಎ) ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ಭಾಗಶಃ ವಿರುದ್ದವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**<u>ಪಾಟೀ ಸವಾಲುಃ ಮಾನ್ಯ ಸ.ಸ.ಅ.ರವರಿಂದಃ</u>**

ನನಗೆ ಆರೋಪಿ ಪರಿಚಯಸ್ಥನಾಗಿದ್ದು ಆತ ನಮ್ಮ ಮೋಟಾರ್ಸನಲ್ಲಿ ಕೆಲಸ ಮಾಡುತ್ತಿದ್ದು ಆತನನ್ನು ಹಾಜರುಪಡಿಸಿ ಸೂಕ್ತ ಜಾಮೀನಿನ ಮೇರೆಗೆ ಬಿಡಿಸಿಕೊಂಡು ಹೋಗುವ ವೇಳೆಗೆ ನಿಪಿ-18 ಕ್ಕೆ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಆತನ ದಸ್ತಗಿರಿ ಕ್ರಮವನ್ನು ನನ್ನ ಸಮಕ್ಷಮ ಸಂಜೆ 6 ರಿಂದ 6-30ರ ವೇಳೆಗೆ ಠಾಣೆಯಲ್ಲಿ ಜರುಗಿಸಿದ್ದರು ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.</u>**

**<u>ಮರು ವಿಚಾರಣೆಃ ಇಲ್ಲ.</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**